ಗ್ರಾಮೀಣ ಭಾಗದ ಕಾಲೇಜಿನಲ್ಲಿ ಮೂಲಭೂತ ಸೌಕರ್ಯದ ಕೊರತೆ

851 (981) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದ ಗ್ರಾಮೀಣ ಪ್ರದೇಶದಲ್ಲಿರುವ ಪ್ರಥಮ ದರ್ಜೆ ಕಾಲೇಜಿನಲ್ಲಿ ಮೂಲಭೂತ ಸೌಕರ್ಯದ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಈ ಕೊರತೆ ಪರಿಹರಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

ಡಾ : ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಳ್ಳಲು 2010–11ನೇ ಸಾಲಿನಲ್ಲಿ ರೂ. 1088.53 ಲಕ್ಷಗಳನ್ನು ಒದಗಿಸಿಕೊಂಡು ಗ್ರಾಮೀಣ ಪ್ರದೇಶದಲ್ಲಿರುವ ಸರ್ಕಾರಿ ಕಾಲೇಜುಗಳನ್ನು ಒಳಗೊಂಡಂತೆ ರಾಜ್ಯದ ಎಲ್ಲಾ 356 ಕಾಲೇಜುಗಳಿಗೆ ಗ್ರಂಥಾಲಯ ಪುಸ್ತಕಗಳು, ಕಛೇರಿ ವೆಚ್ಚ, ಜೆರಾಕ್ಸ್ ಮೆಷಿನ್, ಫ್ಯಾಕ್ಸ್ ಮೆಷಿನ್, ಪೀಠೋಪಕರಣ ಇನ್ನಿತರೆಗಳನ್ನು ಖರೀದಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ.

2. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳನ್ನು ನೀಡಲು ಕ್ರಮವಾಗಿ ರೂ. 1016.00 ಲಕ್ಷ ಮತ್ತು ರೂ. 636.60 ಲಕ್ಷಗಳನ್ನು ಒದಗಿಸಲಾಗಿದೆ.

3. ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪೈಕಿ ಕಟ್ಟಡವಿಲ್ಲದಿರುವ ಕಾಲೇಜುಗಳಿಗೆ ಹಾಗೂ ಅವಶ್ಯವಿರುವ ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಲು ರೂ. 8517.00 ಲಕ್ಷಗಳ ಅನುದಾನ ಬಿಡುಗಡೆ ಮಾಡಿದೆ.